**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಯಲ್ಲಿ ವಸತಿ ಶಾಲೆಗಳಿಲ್ಲದ ಹೋಬಳಿಗಳಿಗೆ 2013-14ನೇ ಸಾಲಿನಲ್ಲಿ ಮಂಜೂರಾದ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ವರ್ಗಾವಣೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 335 ಬಿಎಂಎಸ್ 2012, ಬೆಂಗಳೂರು, ದಿ:21-11-2012
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 43 ಬಿಎಂಎಸ್ 2014, ಬೆಂಗಳೂರು, ದಿ:22-01-2014
3. ಜಿಲ್ಲಾಧಿಕಾರಿಗಳು ಕೋಲಾರ ಜಿಲ್ಲೆ ಇವರ ಪತ್ರ ಸಂಖ್ಯೆ: ಎಲ್ಎನ್ಡಿ(ವನಿ)ಸಿಆರ್/99/2013-14, ದಿ:17.01.2014
4. ಕಾರ್ಯನಿರ್ವಾಹಕ ನಿರ್ದೇಶಕರು ಕವಶಿಸಸ ಏಕ ಕಡತ ಸಂಖ್ಯೆ: ಕವಶಿಸಸ/ಯೋಜನೆ/ಸಿಆರ್-74/2013-14, ದಿನಾಂಕ:23-01-2014

**ಪ್ರಸ್ತಾವನೆ**

ಓದಲಾದ (1) ರ ಸರ್ಕಾರದ ಆದೇಶಗಳಲ್ಲಿ 2013-14ನೇ ಸಾಲಿಗೆ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡಲಾಗಿದೆ. ಈ ವಸತಿ ಶಾಲೆಗಳ ಕಟ್ಟಡ ನಿರ್ಮಾಣ ಮಾಡಲು ಜಮೀನು ಮಂಜೂರಾತಿ ಮತ್ತು ವಸತಿ ಶಾಲೆಗಳನ್ನು ಪ್ರಾರಂಭಿಸಲು ಸೂಕ್ತ ಬಾಡಿಗೆ ಕಟ್ಟಡಗಳನ್ನು ಪಡೆದು ಪ್ರಾರಂಭಿಸಲು ಉದ್ದೇಶಿಸಿ, ಪ್ರಾರಂಭವನ್ನು ಮುಂದೂಡಲಾಗಿದೆ.

ಓದಲಾದ (4) ರ ಏಕ ಕಡತದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಕೋಲಾರ ಜಿಲ್ಲೆಯ 14 ಹೋಬಳಿಗಳಲ್ಲಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ 12 ಹೋಬಳಿಗಳಲ್ಲಿ ಯಾವುದೇ ವಸತಿ ಶಾಲೆಗಳು ಮಂಜೂರಾಗಿರುವುದಿಲ್ಲ ಎಂದು ತಿಳಿಸಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಜನಸಂಖ್ಯೆ ಪ್ರಮಾಣವು ಇತರೆ ಜಿಲ್ಲೆಗಳಿಗಿಂತ ಹೆಚ್ಚಾಗಿದ್ದು, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಮತ್ತು ಜಿಲ್ಲಾಧಿಕಾರಿಗಳು,ಕೋಲಾರ ಜಿಲ್ಲೆ ಇವರ ಪತ್ರದ ಉಲ್ಲೇಖ (2) ರಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಜಮೀನು ಕಾಯ್ದಿರಿಸಿರುವುದಾಗಿ ತಿಳಿಸಿರುವುದರಿಂದ 2013-14ನೇ ಸಾಲಿನಲ್ಲಿ ಮಂಜೂರಾಗಿ ಪ್ರಾರಂಭವಾಗದ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ವಸತಿ ಶಾಲೆಗಳಿಲ್ಲದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ತಾಲ್ಲೂಕುಗಳ ಹೋಬಳಿಗಳಿಗೆ ವರ್ಗಾವಣೆ ಮಾಡಲು ಪ್ರಸ್ತಾಪಿಸಲಾಗಿದೆ. ಹಾಗೂ ಉಲ್ಲೇಖ (2) ರ ಆದೇಶವನ್ನು ಹಿಂಪಡೆಯಲು, ಮತ್ತು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 45 ಬಿಎಂಎಸ್ 2014, ಬೆಂಗಳೂರು, ದಿನಾಂಕ:23.01.2014**

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಗುಣಮಟ್ಟ ಶಿಕ್ಷಣಕ್ಕಾಗಿ 2013-14ನೇ ಸಾಲಿನಲ್ಲಿ ಮಂಜೂರಾಗಿ ಪ್ರಾರಂಭವಾಗದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ವರ್ಗಾಯಿಸಿ ಆದೇಶಿಸಿದ ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 43 ಬಿಎಂಎಸ್ 2014, ದಿ:22-01-2014 ನ್ನು ಹಿಂಪಡೆದು, ಈ ಕೆಳಕಂಡ ಸ್ಥಳಗಳಿಗೆ ವರ್ಗಾವಣೆ ಮಾಡಿ ಆದೇಶಿಸಿದೆ.

→

| ಕ್ರ, ಸಂ | 2013-14ನೇ ಸಾಲಿನಲ್ಲಿ ಮಂಜೂರಾಗಿರುವ ವಸತಿ ಶಾಲೆಗಳ ವಿವರ | ವರ್ಗ | ಮಂಜೂರಾದ ಸರ್ಕಾರದ ಆದೇಶದ ಸಂಖ್ಯೆ ಮತ್ತು ದಿನಾಂಕ | ವರ್ಗಾವಣೆ ಮಾಡಿ ಆದೇಶಿಸಿರುವ ಸ್ಥಳ | ವ |
|---|---|---|---|---|---|
| ಅ) | **ಕೋಲಾರ ಜಿಲ್ಲೆ** | | | | |
| 1 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಬಸವನ ಬಾಗೇವಾಡಿ, ಬಿಜಾಪುರ ಜಿಲ್ಲೆ | ಹಿಂ ವರ್ಗ | ಬಿಸಿಡಬ್ಲ್ಯೂ 335 ಬಿಎಂಎಸ್ 2012, 21-11-2012 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ವಾನಗಾನಹಳ್ಳಿ ತಾಯಲೂರು ಹೋಬಳಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ | ಹಿಂ.ವರ್ಗ |
| 2 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಶ್ರವಣಬೆಳಗೊಳ ಹಾಸನ ಜಿಲ್ಲೆ | ಹಿಂ ವರ್ಗ | ಬಿಸಿಡಬ್ಲ್ಯೂ 335 ಬಿಎಂಎಸ್ 2012, 21-11-2012 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹೋಳಲಿ, ಹುತ್ತೂರು ಹೋಬಳಿ, ಕೋಲಾರ ತಾಲ್ಲೂಕು॥ | ಹಿಂ.ವರ್ಗ |
| 3 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ತುಮಕೂರು ಗ್ರಾಮಾಂತರ, ತುಮಕೂರು ಜಿಲ್ಲೆ | ಹಿಂ.ವರ್ಗ | ಬಿಸಿಡಬ್ಲ್ಯೂ 335 ಬಿಎಂಎಸ್ 2012, 21-11-2012 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಪೀಲವಾರ, ಕ್ಯಾಸಂಬಳ್ಳಿ ಹೋಬಳಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ. | ಹಿಂ.ವರ್ಗ |
| 4 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಸಿಂಧನೂರು, ರಾಯಚೂರು ಜಿಲ್ಲೆ. | ಹಿಂ.ವರ್ಗ | ಬಿಸಿಡಬ್ಲ್ಯೂ 335 ಬಿಎಂಎಸ್ 2012, 21-11-2012 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಯಲ್ದೂರು, ಯಲ್ದೂರು ಹೋಬಳಿ, ಶ್ರೀನಿವಾಸಪುರ ತಾಲ್ಲೂಕು, ಕೋಲಾರ ಜಿಲ್ಲೆ. | ಹಿಂ.ವರ್ಗ |
| ಆ) | **ಚಿಕ್ಕಬಳ್ಳಾಪುರ ಜಿಲ್ಲೆ** | | | | |
| 5 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ | ಹಿಂ.ವರ್ಗ | ಬಿಸಿಡಬ್ಲ್ಯೂ 335 ಬಿಎಂಎಸ್ 2012, 21-11-2012 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹನೂರು, ಕಸಬಾ ಹೋಬಳಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ | ಹಿಂ.ವರ್ಗ |
| 6 | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹುನಗುಂದ, ಬಾಗಲಕೋಟೆ ಜಿಲ್ಲೆ. | ಹಿಂ.ವರ್ಗ | ಬಿಸಿಡಬ್ಲ್ಯೂ 335 ಬಿಎಂಎಸ್ 2012, 21-11-2012 | ಮೊರಾರ್ಜಿ ದೇಸಾಯಿ ವಸತಿ ಶಾಲೆ,ಅಪ್ಪಗೌಡನಹಳ್ಳಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ | ಹಿಂ.ವರ್ಗ |

ಮಂಜೂರಾದ ವಸತಿ ಶಾಲೆಗಳನ್ನು ಪ್ರಾರಂಬಿಸುವ ಮುನ್ನಾ ಈ ಕೆಳಕಂಡ ನಿಬಂಧನೆಗಳಿಗೊಳಪಟ್ಟು ಶಾಲೆಗಳನ್ನು ಪ್ರಾರಂಭಿಸಲು ಆದೇಶಿಸಿದೆ.

1. ವಸತಿ ಶಾಲಾ ಕಟ್ಟಡ ನಿರ್ಮಾಣಕ್ಕೆ ಕನಿಷ್ಟ 10 ಎಕರೆ ಸೂಕ್ತ ಸರ್ಕಾರದ ಜಮೀನನ್ನು ಮಂಜೂರು ಮಾಡಬೇಕು.
2. ಒಂದು ವೇಳೆ ಸರ್ಕಾರದ ಜಮೀನು ಲಭ್ಯವಿಲ್ಲದಿದ್ದಲ್ಲಿ ಸೂಕ್ತ ಖಾಸಗಿ ಜಮೀನನ್ನು ಖರೀದಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಮೀನು ಖರೀದಿ ಸಮಿತಿ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಕೇಂದ್ರ ಕಛೇರಿಗೆ ಸಲ್ಲಿಸಿ ಅನುಮೋದನೆಯಾದ ನಂತರ ವಸತಿ ಶಾಲೆಯನ್ನು ಪ್ರಾರಂಭಿಸಬೇಕು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಹೆಚ್. ಬಿ. ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು,(ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
6. ಎಲ್ಲಾ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು

   } ಕಾರ್ಯನಿರ್ವಾಹಕ ನಿರ್ದೇಶಕರು, ಕ.ವ.ಶಿ.ಸ.ಸಂ. ಇವರ ಮೂಲಕ

7. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
8 ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9 ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
10. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು
11. ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಸಹಾಯಕರು ಬೆಂಗಳೂರು
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.